ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕಬ್ಬು ಬೆಳೆಯುವ ರೈತರ ಕಬ್ಬಿಗೆ ವಿಭಿನ್ನ ಬೆಲೆ ನೀಡುವ ಕುರಿತು

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

850 (956) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ರೈತರು ಬೆಳೆದ ಕಬ್ಬಿನ ಬೆಳೆಯನ್ನು ನುರಿಯಲು ಎಷ್ಟು ಸಕ್ಕರೆ ಕಾರ್ಖಾನೆಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಬೆಳಗಾವಿ ಜಿಲ್ಲೆಯಲ್ಲಿ ರೈತರು ಬೆಳೆದ ಕಬ್ಬಿಗೆ ವಿವಿಧ ಕಾರ್ಖಾನೆಗಳು ವಿಭಿನ್ನ ರೀತಿಯಲ್ಲಿ ಬೆಲೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ನಿಲುವೇನು ;

(ಇ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ರೈತರು ಬೆಳೆದ ಕಬ್ಬಿಗೆ ಏಕರೂಪ ಬೆಲೆ ನಿಗಧಿಪಡಿಸಲು ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಈ) ಕಬ್ಬಿನ ಕಾರ್ಖಾನೆಗಳು ತ್ಯಾಜ್ಯ ವಸ್ತುಗಳು ಸಮರ್ಪಕ ವಿಲೇವಾರಿಗೆ ಸರ್ಕಾರ ರಾಜ್ಯದ ವಾಯು ಮಾಲಿನ್ಯ ಇಲಾಖೆ/ಸಂಸ್ಥೆಗಳ ಮತ್ತು ಸರ್ಕಾರೇತರ ಪರಿಸರ ವಾದಿಗಳ ಸಂಸ್ಥೆಗಳ ಪ್ರತಿನಿಧಿಗಳನ್ನು ಒಳಗೊಂಡಂತೆ ಸಮನ್ವಯ ಸಮಿತಿ ರಚಿಸಿ ಕಾರ್ಖಾನೆಗಳಿಂದ ಮಾಲಿನ್ಯ ತಡೆಗೆ ಕ್ರಮ ವಹಿಸಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)